ಕರ್ನಾಟಕ ಲೋಕಸೇವಾ ಆಯೋಗ

ಸಂಖ್ಯೆ: PSC 307 C(2)/2026-27.

ದಿನಾಂಕ:21-11-2026

ಪ್ರಕಟಣೆ

2026-27ನೇ ಸಾಲಿನ ಗೆಜ್ಜೆಟೆಡ್ ಪ್ರೊಬೇಷನರ್ಸ್ ಹುದ್ದೆಗಳಿಗೆ ಸಂಬಂಧಿಸಿದಂತೆ ಆಯೋಗದಿಂದ ನಡೆಸಲಾದ ಪೂರ್ವಭಾವಿ ಪರೀಕ್ಷೆಯ ತಾತ್ಕಾಲಿಕ ಫಲಿತಾಂಶವನ್ನು ಪ್ರಕಟಿಸುವ ಬಗ್ಗೆ.

****

ಕರ್ನಾಟಕ ಲೋಕಸೇವಾ ಆಯೋಗದಿಂದ ಅಧಿಸೂಚಿಸಲಾದ 2026-27ನೇ ಸಾಲಿನ ಗೆಜ್ಜೆಟೆಡ್ ಪ್ರೊಬೇಷನರ್ಸ್ ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ ದಿನಾಂಕ:15.11.2026ರಂದು ನಡೆಸಲಾದ ಪೂರ್ವಭಾವಿ ಪರೀಕ್ಷೆಯ ಪತ್ರಿಕೆ-1 ಮತ್ತು ಪತ್ರಿಕೆ-2ರ ಕೀ ಉತ್ತರಗಳನ್ನು ಆಯೋಗದ ವೆಬ್‌ಸೈಟ್‌ನಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ದಿನಾಂಕ:16-11-2026ರಂದು ಪ್ರಕಟಿಸಲಾಗಿತ್ತು. ಪ್ರಕಟಿತ ಕೀ ಉತ್ತರಗಳಿಗೆ ಆಕ್ಷೇಪಣೆಗಳಿದ್ದಲ್ಲಿ ದಿನಾಂಕ:19-11-2026ರ ಬೆಳಿಗ್ಗೆ 10.30ಗಂಟೆಯೊಳಗೆ ಆಕ್ಷೇಪಣೆ ಸಲ್ಲಿಸಲು ಕಾಲಾವಕಾಶ ನೀಡಲಾಗಿತ್ತು.

ಅದರಂತೆ ಸ್ವೀಕೃತವಾದ ಆಕ್ಷೇಪಣೆಗಳನ್ನು ವಿಷಯ ತಜ್ಞರ ಸಮಿತಿಯ ಮೂಲಕ ಪರಿಶೀಲಿಸಿ ಪರಿಷ್ಕೃತ ಕೀ ಉತ್ತರಗಳನ್ನು ದಿನಾಂಕ:21-11-2026ರಂದು ಪ್ರಕಟಿಸಲಾಗಿದ್ದು, ಸದರಿ ಪರಿಷ್ಕೃತ ಕೀ ಉತ್ತರಗಳನ್ವಯ ಅಭ್ಯರ್ಥಿಗಳು ಪೂರ್ವಭಾವಿ ಪರೀಕ್ಷೆಯಲ್ಲಿ ಗಳಿಸಿರುವ ಅಂಕಗಳ ತಾತ್ಕಾಲಿಕ ಫಲಿತಾಂಶವನ್ನು ದಿನಾಂಕ:21-11-2026ರಂದು ಪ್ರಕಟಿಸಲಾಗಿದೆ.

ಪ್ರಕಟಿತ ತಾತ್ಕಾಲಿಕ ಫಲಿತಾಂಶಕ್ಕೆ ಆಕ್ಷೇಪಣೆಗಳಿದ್ದಲ್ಲಿ ದಿನಾಂಕ:23-11-2026 ಬೆಳಿಗ್ಗೆ 11.00 ಗಂಟೆಯೊಳಗೆ ನಿಗದಿತ ಲಿಂಕ್ (https://forms.gle/t4TeGSQfyGRTzXWL7) ಮೂಲಕ ಪೂರಕ ದಾಖಲೆಗಳನ್ನು ಸಲ್ಲಿಸತಕ್ಕದ್ದು. ಪೂರಕ ದಾಖಲೆಗಳಿಲ್ಲದ ಹಾಗೂ ಕೀ ಉತ್ತರಗಳಿಗೆ ಸಲ್ಲಿಸಲಾಗುವ ಆಕ್ಷೇಪಣೆಗಳನ್ನು ಈ ಹಂತದಲ್ಲಿ ಪರಿಗಣಿಸಲಾಗುವುದಿಲ್ಲ.

ಪರೀಕ್ಷಾ ನಿಯಂತ್ರಕರು,
ಕರ್ನಾಟಕ ಲೋಕಸೇವಾ ಆಯೋಗ.